# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಮಾಜ ಕಲ್ಯಾಣ ಸಚಿವಾಲಯದ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ವ್ಯಾಪ್ತಿಯಲ್ಲಿ ನಡೆಸುತ್ತಿರುವ ಸರ್ಕಾರದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿಯ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಹೆಚ್ಚಿಸುವ ಬಗ್ಗೆ ಆದೇಶ.

ಓದಲಾಗಿದೆ.

1. ಸರ್ಕಾರಿ ಆದೇಶ ಸಂಖ್ಯೆ 306 ಪಕವಿ 1999 ದಿನಾಂಕ:5.8.2000
2. ಆಯುಕ್ತರು ಹಿಂದುಳಿದ ವರ್ಗಗಳ ಇಲಾಖೆ ಇವರ ಪತ್ರ ಸಂಖ್ಯೆ ಹಿಂವನಿ/ವನಿಶಾ.2 /ಸಿಆರ್.164 /2004-05 ದಿನಾಂಕ:7.4.2005 ಮತ್ತು 2.9.2005
3. ನಿರ್ದೇಶಕರು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ/ ಪಕನಿ/ಇಡಿ.2/ಸಿಆರ್/12/2005-06 ದಿನಾಂಕ:25.5.2005
4. ನಿರ್ದೇಶಕರು ಅಲ್ಪಸಂಖ್ಯಾತರ ಇಲಾಖೆ ಇವರ ಪತ್ರ ಸಂಖ್ಯೆ ಅಸಂನಿ/ಸಿಬ್ಬಂದಿ/ಸಿಆರ್.19/2005-06 ದಿನಾಂಕ:12.5.2005
5. ದಿನಾಂಕ:7.10.2005 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಗಳು.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಸಮಾಜ ಕಲ್ಯಾಣ ಸಚಿವಾಲಯದ ವ್ಯಾಪ್ತಿಯಲ್ಲಿ ಬರುವ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಇಲಾಖೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ಈ ಕೆಳಕಂಡಂತೆ ಹೆಚ್ಚಿಸಲಾಗಿದೆ.

1.ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳ ಮಾಹೆಯಾಗ ಭೋಜನಾ ವೆಚ್ಚ ರೂ.350/- ರಿಂದ 400/-

2.ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳ ಮಾಹೆಯಾಗ ಭೋಜನಾ ವೆಚ್ಚ ರೂ.400/- ರಿಂದ 450/-

2005-06 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರಾಜ್ಯದಲ್ಲಿರುವ ಎಲ್ಲಾ ಪರಿಶಿಷ್ಟಜಾತಿ ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ವಸತಿ ನಿಲಯಗಳಲ್ಲಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿರುವ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಕ್ರಮವಾಗಿ ಮಾಹೆಯಾನ ರೂ.400/- ರಿಂದ ರೂ450/- ಹಾಗೂ ರೂ.450/- ರಿಂದ ರೂ.500/- ಕ್ಕೆ ಹೆಚ್ಚಿಸಲಾಗುವುದೆಂದು ಘೋಷಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಿಂದ (5) ರಲ್ಲಿ ಆಯುಕ್ತರು ಹಿಂದುಳಿದ ವರ್ಗಗಳ ಇಲಾಖೆ, ನಿರ್ದೇಶಕರು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ನಿರ್ದೇಶಕರು ಅಲ್ಪಸಂಖ್ಯಾರ ಇಲಾಖೆ ಇವರುಗಳು ಆಹಾರ ಸಾಮಾಗ್ರಿಗಳ ದರಗಳು ಹೆಚ್ಚಳವಾಗಿರುವುದರಿಂದ ಸರ್ಕಾರಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಕ್ರಮವಾಗಿ ಪ್ರತಿ ವಿದ್ಯಾರ್ಥಿಗೆ ಮಹೆಯಾನ ರೂ.400/- ರಿಂದ ರೂ450/- ಹಾಗೂ ರೂ.450/- ರಿಂದ ರೂ.500/- ಕ್ಕೆ ಹೆಚ್ಚಿಸುವಂತೆ ಕೋರಿರುತ್ತಾರೆ.

ದಿನಾಂಕ:7.10.2005 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ಈ ಪ್ರಸ್ತಾವನೆಯನ್ನು ಕುಲಂಕುಶವಾಗಿ ಪರಿಶೀಲಿಸಿ ಈ ಪ್ರಸ್ತಾವನೆಗೆ ಅನುಮೋದನೆ ನೀಡಿದ್ದು ಅದರಂತೆ ಈ ಆದೇಶ

ಸರ್ಕಾರದ ಆದೇಶ ಸಂಖ್ಯೆ ಸಕಇ 175 ಬಿಎಂಎಸ್ 2005
ಬೆಂಗಳೂರು, ದಿನಾಂಕ 7.11.2005

ಮೇಲಿನ ವಿಷಯವನ್ನು ಕುಲಂಕುಶವಾಗಿ ಪರಿಶೀಲಿಸಿದ ನಂತರ ಸಮಾಜ ಕಲ್ಯಾಣ ಸಚಿವಾಲಯದ ವ್ಯಾಪ್ತಿಗೆ ಬರುವ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆಯ ಹಾಗೂ ಅಲ್ಪಸಂಖ್ಯಾತರ ಇಲಾಖೆಗಳ ಸರ್ಕಾರಿ ಮೆಟ್ರಿಕ್ ಪೂರ್ವ ಹಾಗೂ ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡಂತೆ ಹೆಚ್ಚಿಸಿ ಆದೇಶಿಸಲಾಗಿದೆ.

1.ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳ ಮಾಹೆಯಾನ ಭೋಜನಾ ವೆಚ್ಚ ರೂ.400/- ರಿಂದ 450/-

2.ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳ ಮಾಹೆಯಾನ ಭೋಜನಾ ವೆಚ್ಚ ರೂ.450/- ರಿಂದ 500/-

ಈ ಆದೇಶವನ್ನು ಅಧಿಕಾರಿಯುಕ್ತ ಸಮಿತಿಯು ತನ್ನ ನಡವಳಿ ದಿನಾಂಕ: 07-10-2005ರಂದು ನೀಡಿದ ಅನುಮೋದನೆ ಪ್ರಕಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಪ್ರಾಣದೇವ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ

ಇವರಿಗೆ
ಸಂಕಲನಕಾರರು ಕರ್ನಾಟಕ ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 300 ಪ್ರತಿಯನ್ನು ಒದಗಿಸಲು ಕೋರಿದೆ.

ಪ್ರತಿಗಳು
1.ಮಹಾಲೇಖ ಪಾಲರು (ಲೆಕ್ಕ ಮತ್ತು ತನಿಖೆ) ಕರ್ನಾಟಕ, ಬೆಂಗಳೂರು.